## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ದೂರದೃಷ್ಟಿ ತಯಾರಿಕೆ ಸಂಬಂಧ ವಿವಿಧ ತರಬೇತಿ ಕಾರ್ಯಕ್ರಮಗಳನ್ನು ಕೈಗೊಳ್ಳಲು ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ (ANSSIRD & PR) ಸಂಸ್ಥೆಗೆ ರೂ.147.50ಲಕ್ಷಗಳ ಅನುದಾನವನ್ನು ಬಿಡುಗಡೆಗೊಳಿಸುವ ಕುರಿತು.

**ಓದಲಾಗಿದೆ:**

1. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನ ಮತ್ತು ಅಭಿವೃದ್ಧಿ ಸಮಿತಿ ಇವರ ಪತ್ರ ಸಂಖ್ಯೆ:ಉಪ/ಕ.ರಾ.ವಿ.ಯೋ.ಅ.ಸ/173/2022 ದಿನಾಂಕ:23-05-2022.
2. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನ ಮತ್ತು ಅಭಿವೃದ್ಧಿ ಸಮಿತಿ ಇವರ ಪತ್ರ ಸಂಖ್ಯೆ: ಉಪ/ಕ.ರಾ.ವಿ.ಯೋ.ಅ.ಸ/188/2022, ದಿನಾಂಕ: 26-07-2022.

**ಪ್ರಸ್ತಾವನೆ:**

ಮೇಲೆ ಓದಲಾದ(1)ರ ಪತ್ರದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 310 ಹಾಗೂ ಪ್ರಕರಣ 309 (ಡಿ)ರನ್ವಯ ಕ್ರಮವಾಗಿ ಪ್ರತಿ ಜಿಲ್ಲೆಯಲ್ಲಿ ಜಿಲ್ಲಾ ಯೋಜನಾ ಸಮಿತಿಗಳು ಹಾಗೂ ಪ್ರತಿ ತಾಲ್ಲೂಕಿನಲ್ಲಿ ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿಯನ್ನು ರಚಿಸಲಾಗಿರುತ್ತದೆ. ಜಿಲ್ಲಾ ಯೋಜನಾ ಸಮಿತಿ ಹಾಗೂ ತಾಲ್ಲೂಕು ಯೋಜನಾ ಸಮಿತಿಗಳು ಯೋಜನೆಗಳನ್ನು ತಳಮಟ್ಟದಿಂದ ರಾಜ್ಯ ಮಟ್ಟದವರೆವಿಗೆ ರೂಪಿಸಲು ಕ್ರಮ ಕೈಗೊಳ್ಳಬೇಕಾಗಿದ್ದು, ಈ ದಿಸೆಯಲ್ಲಿ ಸದರಿ ಸಮಿತಿಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಅನುವಾಗುವಂತೆ ಸಭಾ ವೆಚ್ಚ ಭರಿಸಲು ಪ್ರತಿ ಜಿಲ್ಲಾ ಯೋಜನಾ ಸಮಿತಿ (DPC) ಗೆ ರೂ.1.00ಲಕ್ಷ ಹಾಗೂ ಪ್ರತಿ ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿಗೆ (TPDC) ರೂ.0.50ಲಕ್ಷಗಳನ್ನು ಬಿಡುಗಡೆಗೊಳಿಸುವಂತೆ ಕೋರಿರುತ್ತಾರೆ.

ಮೇಲೆ ಓದಲಾದ(2)ರ ಪತ್ರದಲ್ಲಿ ಗ್ರಾಮ ಪಂಚಾಯಿತಿ ದೂರದೃಷ್ಟಿ ಯೋಜನೆ ತಯಾರಿಕೆಯು ಒಂದು ಮಹತ್ವಾಕಾಂಕ್ಷಿಯ ಕಾರ್ಯಕ್ರಮವಾಗಿದ್ದು, ಸದರಿ ಕಾರ್ಯಕ್ರಮಕ್ಕೆ ಹೆಚ್ಚಿನ ಅನುದಾನದ ಅಗತ್ಯವಿರುವುದರಿಂದ ಜಿಲ್ಲಾ ಯೋಜನಾ ಸಮಿತಿ ಮತ್ತು ತಾಲ್ಲೂಕು ಯೋಜನಾ ಸಮಿತಿಗೆ ಅನುದಾನ ಬಿಡುಗಡೆಗೊಳಿಸುವ ಬದಲಿಗೆ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ (ANSSIRD&PR) ಸಂಸ್ಥೆಯು ದೂರದೃಷ್ಟಿ ತಯಾರಿಕೆ ಸಂಬಂಧ ವಿವಿಧ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದ್ದು, ಆದರಲ್ಲಿ ವಿಕೇಂದ್ರೀಕರಣ ತತ್ವದಡಿ ಎಲ್ಲಾ ಅನುಷ್ಠಾನ ಇಲಾಖೆಗಳ ಅಧಿಕಾರಿ/ಸಿಬ್ಬಂದಿಗೆ ನೀಡುವ ತರಬೇತುದಾರರ ತರಬೇತಿ ಕಾರ್ಯಕ್ರಮಕ್ಕೆ ತಗಲುವ ವೆಚ್ಚವನ್ನು ಭರಿಸಲು ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯು ಉದ್ದೇಶಿಸಿದ್ದು, 2022-23ನೇ ಸಾಲಿನ ಲೆಕ್ಕಶೀರ್ಷಿಕೆ: 2515-00-101-0-09-103ರಡಿ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಗೆ ಹಂಚಿಕೆ ಮಾಡಿರುವ ಅನುದಾನದಲ್ಲಿ ಒಟ್ಟು ರೂ.147.50 ಲಕ್ಷಗಳನ್ನು ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ (ANSSIRD&PR) ಸಂಸ್ಥೆಗೆ ಬಿಡುಗಡೆಗೊಳಿಸಲು ಕೋರಿರುತ್ತಾರೆ.

ಅದರಂತೆ, 2022-23ನೇ ಆರ್ಥಿಕ ಸಾಲಿನ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಕಾರ್ಯಕ್ರಮ ಹಾಗೂ ಇತರೆ ಗ್ರಾಮೀಣಾಭಿವೃದ್ಧಿ ಚಟುವಟಿಕೆಗಳ ಲೆಕ್ಕಶೀರ್ಷಿಕೆ:2515-00-101-0-09-103ರಡಿ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಗೆ ರೂ.300.00ಲಕ್ಷಗಳ ಅನುದಾನ ಒದಗಿಸಲಾಗಿರುತ್ತದೆ. ಸದರಿ ಅನುದಾನದಲ್ಲಿ ಒಟ್ಟು ರೂ.147.50ಲಕ್ಷಗಳನ್ನು ದೂರದೃಷ್ಟಿ ತಯಾರಿಕೆ ಸಂಬಂಧ ವಿವಿಧ ತರಬೇತಿ ಕಾರ್ಯಕ್ರಮಗಳನ್ನು ಕೈಗೊಳ್ಳಲು ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ (ANSSIRD&PR) ಸಂಸ್ಥೆ, ಮೈಸೂರು ಇಲ್ಲಿಗೆ ಬಿಡುಗಡೆಗೊಳಿಸಲು ಸರ್ಕಾರವು ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 287 ಜಿಪಸ 2022, ದಿನಾಂಕ:19-09-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಆರ್ಥಿಕ ಸಾಲಿನ ಆಯವ್ಯಯದಲ್ಲಿ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಕಾರ್ಯಕ್ರಮ ಹಾಗೂ ಇತರೆ ಗ್ರಾಮೀಣಾಭಿವೃದ್ಧಿ ಚಟುವಟಿಕೆಗಳ ಲೆಕ್ಕಶೀರ್ಷಿಕೆ:2515-00-101-0-09-103ರಡಿ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಗೆ ಒದಗಿಸಲಾಗಿರುವ ರೂ.300.00ಲಕ್ಷಗಳ ಅನುದಾನದಲ್ಲಿ ಒಟ್ಟು ರೂ.147.50(ಒಂದು ನೂರ ನಲವತ್ತೇಳು ಲಕ್ಷದ ಐವತ್ತು ಸಾವಿರ ರೂಪಾಯಿಗಳು ಮಾತ್ರ)ಲಕ್ಷಗಳನ್ನು ದೂರದೃಷ್ಟಿ ತಯಾರಿಕೆ ಸಂಬಂಧ ವಿವಿಧ ತರಬೇತಿ ಕಾರ್ಯಕ್ರಮಗಳನ್ನು ಕೈಗೊಳ್ಳಲು ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ (ANSSIRD&PR) ಸಂಸ್ಥೆ, ಮೈಸೂರು ಇಲ್ಲಿಗೆ ಕೆಳಕಂಡ ಬ್ಯಾಂಕ್ ಖಾತೆಗೆ ಬಿಡುಗಡೆಗೊಳಿಸಿ ಆದೇಶಿಸಿದೆ.

ಬ್ಯಾಂಕ್ ಖಾತೆ ಹೆಸರು: Director, Sponsered Training Programme Funds

ಬ್ಯಾಂಕ್‌ಖಾತೆ ಸಂಖ್ಯೆ: 64096340483

ಐ.ಎಫ್‌ಎಸ್.ಸಿ. ಕೋಡ್: SBIN0041010

ಬ್ರ್ಯಾಂಚ್: ATI, Lalithamahal Road, Mysuru.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆಯವ್ಯಯ ಸೂಚನೆ ಸಂಖ್ಯೆ: ಆಇ07 ವೆಚ್ಚ 6 2022 ದಿ:05.04.2022 ಹಾಗೂ ಆದೇಶ ಸಂಖ್ಯೆ:ಆಇ 01 ಟಿಎಫ್‌ಪಿ 2022, ದಿನಾಂಕ:04-04-2022ರಲ್ಲಿ ಸಂಬಂಧಿಸಿದ ಇಲಾಖಾ ಅಪರ ಮುಖ್ಯ ಕಾರ್ಯದರ್ಶಿ/ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿರವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

19-9-2022 19/9/22

(ಎಂ.ಎಂ.ರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

19/09/22

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿಅಂಡ್‌ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್‌ಆರ್‌ಎಸ್ ಎ), ಕರ್ನಾಟಕ, ಹೊಸಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ಆಯುಕ್ತರು(ಪಂ.ರಾಜ್), ಕರ್ನಾಟಕ ಪಂ.ರಾಜ್ ಆಯುಕ್ತಾಲಯ, ಕೆ.ಜಿ.ರಸ್ತೆ, ಬೆಂಗಳೂರು.
5. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ (ANSSIRD&PR) ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
7. ನಿರ್ದೇಶಕರು(ಅಭಿವೃದ್ಧಿ), ಕರ್ನಾಟಕ ಪಂ.ರಾಜ್ ಆಯುಕ್ತಾಲಯ, ಕೆ.ಜಿ.ರಸ್ತೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-6), ವಿಧಾನಸೌಧ, ಬೆಂಗಳೂರು.
9. ಶಾಖಾ ರಕ್ಷಾಕಡತ/ ಹೆಚ್ಚುವರಿಪ್ರತಿ.

ಪ್ರತಿಯನ್ನುಮಾಹಿತಿಗಾಗಿ:-

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯವರ ಆಪ್ತಕಾರ್ಯದರ್ಶಿ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯವರ ಹಿರಿಯ ಆಪ್ತಕಾರ್ಯದರ್ಶಿ.
3. ಸರ್ಕಾರದ ಜಂಟಿ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕ.
4. ನಿರ್ದೇಶಕರು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕ.
5. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನ ಮತ್ತು ಅಭಿವೃದ್ಧಿ ಸಮಿತಿಯವರ ಆಪ್ತ ಕಾರ್ಯದರ್ಶಿ.